16-12-202

(41)

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀಮತಿ ಉಮಾಶ್ರೀ ಇವರ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಹೇಳಿಕೆ:

**ಶೂನ್ಯ ವೇಳೆ ಪ್ರಸ್ತಾಪ:**

ಆಹಾರ ಸುರಕ್ಷತಾ ಪ್ರಾಧಿಕಾರದಲ್ಲೇ ನಕಲಿ ಅಧಿಕಾರಿಗಳ ಹಾವಳಿ ಇರುವುದು ಬೆಳಕಿಗೆ ಬಂದಿದೆ. ಆರೋಗ್ಯ ಇಲಾಖೆಯ ಪ್ರಮುಖ ಅಂಗವಾಗಿರುವ ಆಹಾರ ಸುರಕ್ಷತ ಪ್ರಾಧಿಕಾರದಲ್ಲಿ ತಜ್ಞ ವೈದ್ಯರಿಗಿತಂತ ಕಿರಿಯ ಶ್ರೇಣಿಯ ಸಾಮಾನ್ಯ ಅಧಿಕಾರಿಗಳದ್ದೇ ಕಾರುಬಾರಾಗಿದೆ. ಅಲ್ಲದೆ ನಿಯಮಕ್ಕೆ ವಿರುದ್ಧವಾಗಿ ನಿಯೋಜನೆಗೊಂಡಿರುವ ಕಿರಿಯ ಅಧಿಕಾರಿಗಳು ಮತ್ತು ಆಹಾರ ಸುರಕ್ಷತಾ ಅಧಿಕಾರಿಗಳಾದ ವೈದ್ಯರ ನಡುವೆ ಕುರ್ಚಿ ಕಾಳಗ ಆರಂಭವಾಗಿದೆ ಎಂದು ತಿಳಿದು ಬಂದಿದೆ. ಸಾರ್ವಜನಿಕರ ಆರೋಗ್ಯಕ್ಕಾಗಿ ಆಸ್ಪತ್ರೆಗಳ ಮೂಲಕ ಕಾಯಿಲೆಗಳನ್ನು ಗುಣಡಿಸುವ ಆರೋಗ್ಯ ಇಲಾಖೆ ಕಾಯಿಲೆಗಳ ಬರದಂತೆ ಜಾಗ್ರತೆ ವಹಿಸಿ ತಡೆಯಲು 17 ವರ್ಷಗಳ ಹಿಂದೆಯೇ ಆಹಾರ ಸುರಕ್ಷತಾ ಪ್ರಾಧಿಕಾರ ರಚಿಸಿತ್ತು. ವಿಚಿತ್ರವೆಂದರೆ ಪ್ರಾಧಿಕಾರ ಆರಂಭವಾದಾಗಿನಿಂದ ಈತನಕ ಒಬ್ಬ ಸಿಬ್ಬಂದಿಯನ್ನೂ ನೇಮಕ ಮಾಡಿಲ್ಲ. ಹೀಗಾಗಿ ಪ್ರಾಧಿಕಾರದಲ್ಲಿ ಇರುವ ಒಟ್ಟಾರೆ 250 ಸಿಬ್ಬಂದಿಯೂ ಆರೋಗ್ಯ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬಂದವರಾಗಿದ್ದಾರೆ. ಇದು ಕೆಸಿಎಸ್ಆರ್ ನಿಯಮದ ವಿರುದ್ಧವಾಗಿರುತ್ತದೆ ಎಂದು ಪ್ರಸ್ತಾಪಿಸಿರುವ ಬಗ್ಗೆ:

**ಹೇಳಿಕೆ:**

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ವೃಂದ ಮತ್ತು ನೇಮಕಾತಿ ನಿಯಮಗಳು ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 397 ಸಿಜಿಇ 2014, ದಿನಾಂಕ:05.01.2017ರಲ್ಲಿ ರಚನೆಯಾಗಿರುತ್ತದೆ.

ಪ್ರಸ್ತುತ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 36 ಅಂಕಿತಾಧಿಕಾರಿಗಳ ಹುದ್ದೆಗಳು ಹಾಗೂ 210 ಆಹಾರ ಸುರಕ್ಷತಾಧಿಕಾರಿಗಳ ಹುದ್ದೆಗಳು ಸೃಜನೆಯಾಗಿರುತ್ತದೆ. 36 ಅಂಕಿತಾಧಿಕಾರಿಗಳ ಹುದ್ದೆಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 26 ವೈದ್ಯಾಧಿಕಾರಿಗಳು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಆಹಾರ ಸುರಕ್ಷತಾಧಿಕಾರಿಗಳ ಹುದ್ದೆಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆರೋಗ್ಯ ಸಹಾಯಕರುಗಳನ್ನು ನಿಯೋಜಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, 210 ಆಹಾರ ಸುರಕ್ಷತಾಧಿಕಾರಿಗಳ ಹುದ್ದೆಗಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 107 ಆರೋಗ್ಯ ಸಹಾಯಕರುಗಳು ನಿಯೋಜನೆ/ಎರವಲು ಸೇವೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಖಾಲಿಯಿರುವ ಅಂಕಿತಾಧಿಕಾರಿಗಳ ಹುದ್ದೆಗಳಿಗೆ ಮತ್ತು ಆಹಾರ ಸುರಕ್ಷತಾಧಿಕಾರಿಗಳ ಹುದ್ದೆಗಳಿಗೆ ಕ್ರಮವಾಗಿ ನಿಯೋಜನೆಗೊಂಡಿರುವ ವೈದ್ಯಾಧಿಕಾರಿಗಳು ಹಾಗೂ ಹಿರಿಯ/ಕಿರಿಯ ಆರೋಗ್ಯ ಸಹಾಯಕರುಗಳಿಗೆ ಕಾರ್ಯವ್ಯವಸ್ಥೆ ಮೇರೆಗೆ ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸಲು ಕ್ರಮವಹಿಸಲಾಗಿದೆ.

ಮುಂದುವರೆದು, ಅಂಕಿತಾಧಿಕಾರಿಗಳು ಹಾಗೂ ಆಹಾರ ಸುರಕ್ಷತಾಧಿಕಾರಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇವೆಗಳುಗೆ ಹಿಂತಿರುಗಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ನೇರ ನೇಮಕಾತಿಯು ಪೂರ್ಣಗೊಳ್ಳುವವರೆಗೆ ಜಿಲ್ಲಾ ಆರೋಗ್ಯಾಧಿಕಾರಿಗಳನ್ನು ಅಂಕಿತಾಧಿಕಾರಿಗಳ ಹುದ್ದೆಯಲ್ಲಿಯೂ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳನ್ನು ಆಹಾರ ಸುರಕ್ಷತಾಧಿಕಾರಿಗಳ ಹುದ್ದೆಯಲ್ಲಿಯೂ ಪ್ರಭಾರದಲ್ಲಿರಿಸುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ.

ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಆಕುಕ 169 ಎಸ್‌ಬಿವಿ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**